ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ : ಕಾಶಿಇ/ಶೈವಿ/27/ಅಕಾನಿ-ಮಂಜೂರು/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಶೇಷಾದ್ರಿ ರಸ್ತೆ, ಬೆಂಗಳೂರು-560001.
ದಿನಾಂಕ : 20.06.2022.

**ಅಧಿಕೃತ ಜ್ಞಾಪನ**

**ವಿಷಯ :** ಅನ್ಯಕಾರ್ಯನಿಮಿತ್ತ ಮಂಜೂರು ಮಾಡುವ ಬಗ್ಗೆ.

**ಉಲ್ಲೇಖ :** ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಧಾರವಾಡ ಇವರ ಪತ್ರಸಂಖ್ಯೆ : ಪ್ರಾಕಧಾ/159/ಅನ್ಯಕಾರ್ಯನಿಮಿತ್ತ/ಜಿಇಎಸ್-01/2022-23, ದಿನಾಂಕ : 16.06.2022.

******

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ ಇಲ್ಲಿನ ಸ್ನಾತಕೋತ್ತರ ಅರ್ಥಶಾಸ್ತ್ರ ಅಧ್ಯಯನ ವಿಭಾಗದಿಂದ ICSSR ಇವರ ಸಹಯೋಗದೊಂದಿಗೆ ದಿನಾಂಕ : 24.06.2022 ಮತ್ತು 25.06.2022 ರಂದು "Indian public finance and policy :Achievements, Challenges and ways forward" ಎಂಬ ವಿಷಯದ ಬಗ್ಗೆ ಎರಡು ದಿನಗಳ ರಾಷ್ಟ್ರೀಯ ಮಟ್ಟದ ಸಮ್ಮೇಳನವನ್ನು ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡದ ಆವರಣದಲ್ಲಿ ಆಯೋಜಿಸಲಾಗಿದ್ದು, ಸದರಿ ರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸುವ ಅಧ್ಯಾಪಕರಿಗೆ ಅನ್ಯಕಾರ್ಯನಿಮಿತ್ತ ರಜೆ ಮಂಜೂರು ಮಾಡಲು ಕೋರಿರುತ್ತಾರೆ.

ಈ ಸಂಬಂಧ, ಸದರಿ ರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸುವ ಇಲಾಖಾ ವ್ಯಾಪ್ತಿಯ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಅರ್ಥಶಾಸ್ತ್ರ ಅಧ್ಯಾಪಕರಿಗೆ (**ಒಂದು ಸೆಮಿಸ್ಟರ್ ಅವಧಿಗೆ ಗರಿಷ್ಠ 4 ದಿನಗಳಿಗೆ ಮೀರದಂತೆ ಭಾಗವಹಿಸುವುದು**) ಹಾಜರಾತಿ ಪ್ರಮಾಣ ಪತ್ರವನ್ನು ಮೇಲಾಧಿಕಾರಿಗಳಿಗೆ ಒಪ್ಪಿಸುವ ನಿಬಂಧನೆಗೊಳಪಟ್ಟು ಸರ್ಕಾರದ/ಇಲಾಖೆಯ ವತಿಯಿಂದ ಯಾವುದೇ ಭತ್ಯೆಗಳಿಲ್ಲದೆ ದಿನಾಂಕ : 24.06.2022 ಮತ್ತು 25.06.2022 ರಂದು ಅನ್ಯಕಾರ್ಯ ನಿಮಿತ್ತ ರಜೆಯನ್ನು ಮಂಜೂರು ಮಾಡಲಾಗಿದೆ.

20/6/22

**ಕಾಲೇಜು ಶಿಕ್ಷಣ ನಿರ್ದೇಶಕರು (ಪ್ರಭಾರ)**

<u>ಇವರಿಗೆ :</u>

01. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಗುಲಬರ್ಗಾ – ಇವರಿಗೆ ಮಾಹಿತಿಗಾಗಿ.
02. ಮುಖ್ಯಸ್ಥರು, ಸ್ನಾತಕೋತ್ತರ ಅರ್ಥಶಾಸ್ತ್ರ ಅಧ್ಯಯನ ವಿಭಾಗ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ – 580 003.
03. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು. (ವೆಬ್‌ಸೈಟ್‌ನಲ್ಲಿ ಅಳವಡಿಸಲು)
04. ಕಛೇರಿ ಪ್ರತಿ.